## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಕೃಷಿ ವಿಶ್ವ ವಿದ್ಯಾಲಯಗಳ ಮೂಲಕ ರೈತರಿಗೆ ಅನುಕೂಲವಾಗುವಂತಹ ತಾಂತ್ರಿಕತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಪರಿಶೀಲಿಸಲು ಉನ್ನತಾಧಿಕಾರ ಸಮಿತಿಯನ್ನು ರಚಿಸುವ ಬಗ್ಗೆ.

ಓದಲಾಗಿದೆ: 1. ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:25.08.2021ರಂದು "ರೈತರ ಆದಾಯ ವನ್ನು ದ್ವಿಗುಣಗೊಳಿಸುವ" ಬಗ್ಗೆ ನಡೆದ ಸಭಾ ನಡವಳಿಗಳು.

2. ಕೃಷಿ ಆಯುಕ್ತರ ಪತ್ರಸಂಖ್ಯೆ: ಸಂಖ್ಯೆ ಉಕೃನಿ (ಕೃಭಾ)/ಸಕೃಪ- ರಾಕೃವಿಯೇ/ಸಮಿತಿ/2021-22 ದಿನಾಂಕ:18.10.2021. ಮತ್ತು ದಿನಾಂಕ:15.11.2021.

ಪ್ರಸ್ತಾವನೆ:

ರೈತರ ಆದಾಯವನ್ನು ದ್ವಿಗುಣಗೊಳಿಸುವ ನಿಟ್ಟಿನಲ್ಲಿ ರಾಜ್ಯದ ವಿವಿಧ ಕೃಷಿ ವಿಶ್ವವಿದ್ಯಾನಿಲಯದವರು ಪ್ರಸ್ತುತ ಕಾಲಘಟ್ಟಕ್ಕೆ ಸರಿಹೊಂದುವಂತೆ ಹಾಗೂ ರೈತರಿಗೆ ಅನುಕೂಲವಾಗುವಂತೆ ತಾಂತ್ರಿಕತೆಗಳನ್ನು ಅಭಿವೃದ್ಧಿಪಡಿಸುವ ಅವಶ್ಯಕತೆಯಿರುತ್ತದೆ.

ಮೇಲೆ ಓದಲಾದ (1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿ:25.08.2021ರಂದು ನಡೆದ ಸಭೆಯಲ್ಲಿ ರೈತರ ಆದಾಯ ದ್ವಿಗುಣಗೊಳಿಸಲು ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳ ಮೂಲಕ ಅನುಕೂಲವಾಗುವಂತೆ ತಾಂತ್ರಿಕತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಪರಿಶೀಲಿಸಲು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ಉನ್ನತಾಧಿಕಾರದ ಸಮಿತಿಯನ್ನು ರಚಿಸಲು ಹಾಗೂ ಸಮಿತಿಯು ವಿವಿಧ ಸಂಶೋಧನೆಗೆ ಸಂಬಂಧಿಸಿದ ವಿಷಯಗಳ ಕುರಿತು ಪರಿಶೀಲನೆ ಮಾಡಲೂ ಸಹ ಕ್ರಮವಹಿಸಲು ತೀರ್ಮಾನಿಸಲಾಗಿರುತ್ತದೆ.

ಮೇಲೆ ಓದಲಾದ (2) ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ "ರೈತರ ಆದಾಯವನ್ನು ದ್ವಿಗುಣಗೊಳಿಸುವ" ಕುರಿತು ದಿನಾಂಕ:25.08.2021ರ ಸಭೆಯಲ್ಲಿನ ತೀರ್ಮಾನದಂತೆ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಹಮ್ಮಿಕೊಳ್ಳಬಹುದಾದ ಕಾರ್ಯತಂತ್ರಗಳ ಕುರಿತು ವರದಿ ಸಲ್ಲಿಸಲು ರೈತರನ್ನು ಒಳಗೊಂಡಂತೆ ಒಂದು ಸಮಿತಿಯನ್ನು ಹಾಗೂ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳ ಮೂಲಕ ರೈತರಿಗೆ ಅನುಕೂಲವಾಗುವಂತೆ ತಾಂತ್ರಿಕತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಪರಿಶೀಲಿಸಲು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ಉನ್ನತಾಧಿಕಾರ ಸಮಿತಿ ರಚಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ,

ಸರ್ಕಾರದ ಆದೇಶಸಂಖ್ಯೆ: AGRI-ASC/87/2021 ಬೆಂಗಳೂರು, ದಿನಾಂಕ: 17.01.2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳ ಮೂಲಕ ರೈತರಿಗೆ ಅನುಕೂಲವಾಗುವಂತಹ ತಾಂತ್ರಿಕತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಪರಿಶೀಲಿಸಲು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ಉನ್ನತಾಧಿಕಾರ ಸಮಿತಿಯನ್ನು ಈ ಕೆಳಗಿನಂತೆ ರಚಿಸಿ ಆದೇಶಿಸಿದೆ.

| ಕ್ರ.ಸಂ. | ಹುದ್ದೆ/ಇಲಾಖೆ | ಪದನಾಮ |
|---|---|---|
| 01. | ಮಾನ್ಯ ಕೃಷಿ ಸಚಿವರು | ಅಧ್ಯಕ್ಷರು |
| 02. | ಮಾನ್ಯ ತೋಟಗಾರಿಕಾ ಸಚಿವರು | ಉಪಾಧ್ಯಕ್ಷರು |
| 03. | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ | ಸದಸ್ಯರು |
| 04. | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆ. | ಸದಸ್ಯರು |

| | | |
|---|---|---|
| 05. | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ. | ಸದಸ್ಯರು |
| 06. | ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ ಬೆಂಗಳೂರು, ಧಾರವಾಡ, ರಾಯಚೂರು. | ಸದಸ್ಯರು |
| 07. | ಕುಲಪತಿಗಳು, ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯ, ಶಿವಮೊಗ್ಗ. | ಸದಸ್ಯರು |
| 08. | ಕುಲಪತಿಗಳು, ತೋಟಗಾರಿಕಾ ವಿಶ್ವವಿದ್ಯಾಲಯ, ಬಾಗಲಕೋಟೆ. | ಸದಸ್ಯರು |
| 09. | ಕುಲಪತಿಗಳು, ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್. | ಸದಸ್ಯರು |
| 10. | ನಿರ್ದೇಶಕರು, ತೋಟಗಾರಿಕಾ ಇಲಾಖೆ. | ಸದಸ್ಯರು |
| 11. | ಕೃಷಿ ನಿರ್ದೇಶಕರು, ಕೃಷಿ ಇಲಾಖೆ. | ಸದಸ್ಯರು |
| 12. | ನಾಲ್ಕು ವರ್ಷಗಳಿಂದೀಚೆಗೆ ಕೃಷಿ ಇಲಾಖೆಯಡಿ ವಾರ್ಷಿಕವಾಗಿ ನೀಡಲಾಗುತ್ತಿರುವ ಕೃಷಿ ಪಂಡಿತ ಪ್ರಶಸ್ತಿ ಪಡೆದ ಮೊದಲ ಮೂರು ವಿಜೇತರು ( ಒಟ್ಟು 12 ರೈತರು) | ಸದಸ್ಯರು |
| 13. | ಕೃಷಿ ಆಯುಕ್ತರು | ಸದಸ್ಯ ಕಾರ್ಯದರ್ಶಿ |

ಸದರಿ ಉನ್ನತ ಮಟ್ಟದ ಸಮಿತಿಯು ಈ ಕೆಳಕಂಡಂತೆ ಜವಾಬ್ದಾರಿಗಳನ್ನು ನಿರ್ವಹಿಸುವುದು.

1. ಅವಶ್ಯಕತೆ ಮತ್ತು ಬೇಡಿಕೆ ಆಧಾರದ ಮೇಲೆ ಸಂಶೋಧನೆ ಕೈಗೊಳ್ಳಬೇಕಾದ ವಿಷಯಗಳ ಕುರಿತು ಪರಿಶೀಲನೆ ಮಾಡುವುದು.

2. ಹೊಸ ಆವಿಷ್ಕಾರ ಮತ್ತು ಸಂಶೋಧನೆಗಳು ರೈತರಿಗೆ ಲಾಭದಾಯಕವಾಗಿದ್ದು, ಗ್ರಾಹಕರಿಗೆ ಪೌಷ್ಟಿಕತೆಯನ್ನು ನೀಡುವಂತಹ ಹಾಗೂ ಪರಿಸರದಲ್ಲಿ ಸುಸ್ಥಿರತೆಯನ್ನು ಕಾಪಾಡುವಂತಹದ್ದಾಗಿರಬೇಕು ಹಾಗೂ ಸರಿಯಾದ ಮಾರ್ಗದ ಮೂಲಕ ಇವುಗಳನ್ನು ರೈತರಿಗೆ ತಲುಪಿಸುವಲ್ಲಿ ಸೂಕ್ತ ನಿರ್ದೇಶನಗಳನ್ನು ನೀಡುವುದು.

3.ಕೃಷಿ ವಲಯದಲ್ಲಿ ಪ್ರಾಥಮಿಕ ಉತ್ಪನ್ನಗಳಿಗೆ ಈಗಾಗಲೇ ಆದ್ಯತೆ ನೀಡಲಾಗಿದ್ದು, ಉಪ ಉತ್ಪನ್ನಗಳಿಗೆ ಸಹ ಹೆಚ್ಚಿನ ಆದ್ಯತೆ ನೀಡುವುದು.

4.ಕೃಷಿ ತೋಟಗಾರಿಕೆ, ಹೈನುಗಾರಿಕೆ, ಪ್ರಾಣಿಜನ್ಯ ಉತ್ಪನ್ನಗಳ ಸಂಸ್ಕರಣೆ, ಗ್ರಾಮೀಣ ಮತ್ತು ಗುಡಿ ಕೈಗಾರಿಕೆಗಳ ಮೂಲಕ ರೈತರಿಗೆ ಆದಾಯ ತರಲು ಹಾಗೂ ಗ್ರಾಮೀಣ ಭಾಗದಲ್ಲಿ ಹೆಚ್ಚಿನ ಉದ್ಯೋಗ ಸೃಜನೆಗೆ ಪೂರಕವಾಗಿ ಯಾವುದೇ ಆರ್ಥಿಕ ಹೊರೆ ಇಲ್ಲದೆ, ಪ್ರತ್ಯೇಕ ಸೆಕೆಂಡರಿ ಕೃಷಿ ನಿರ್ದೇಶನಾಲಯದ ಸ್ಥಾಪನೆ ಮಾಡಿ, ಇದರ ಮೂಲಕ ಕೃಷಿ ಉತ್ಪನ್ನಗಳಿಂದ ಉಪ ಉತ್ಪನ್ನಗಳ ತಯಾರಿಕೆಗೆ ಕಾರ್ಯಕ್ರಮ/ಯೋಜನೆಗಳನ್ನು ರೂಪಿಸಿ ಅನುಷ್ಠಾನ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

P. Sat 17/01/2022

(ಪಿ.ಸತ್ಯ ಭಾಮ)

ಸರ್ಕಾರದ ಅಧೀನ ಕಾರ್ಯದರ್ಶಿ,

ಕೃಷಿ ಇಲಾಖೆ(ಯೋಜನೆ)

ಇವರಿಗೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆ. ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನಾ ಮತ್ತು ಮೀನುಗಾರಿಕೆ ಇಲಾಖೆ.ವಿಕಾಸಸೌಧ, ಬೆಂಗಳೂರು.
3. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ ಬೆಂಗಳೂರು, ಧಾರವಾಡ, ರಾಯಚೂರು.

4.ಕುಲಪತಿಗಳು, ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯ, ಶಿವಮೊಗ್ಗ.

5.ಕುಲಪತಿಗಳು, ತೋಟಗಾರಿಕಾ ವಿಶ್ವವಿದ್ಯಾಲಯ, ಬಾಗಲಕೋಟೆ.

6.ಕುಲಪತಿಗಳು, ಕರ್ನಾಟಕ ಪಶುವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ್.

7.ನಿರ್ದೇಶಕರು, ತೋಟಗಾರಿಕಾ ಇಲಾಖೆ,ಲಾಲ್ ಬಾಗ್ ,ಬೆಂಗಳೂರು.

8.ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.

9.ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.

10.ಕೃಷಿ ಪಂಡಿತ ಪ್ರಶಸ್ತಿ ವಿಜೇತ 12 ರೈತರು (ಕೃಷಿ ಆಯುಕ್ತರ ಮುಖಾಂತರ).

ಪ್ರತಿ ಮಾಹಿತಿಗಾಗಿ:

1.ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರುರವರಿಗೆ ಕಳುಹಿಸುತ್ತಾ ಸದರಿ ಆದೇಶವನ್ನು ಮಾನ್ಯ ಕೃಷಿ ಸಚಿವರ ಗಮನಕ್ಕೆ ತರಲು ಕೋರಿದೆ.

2. ಮಾನ್ಯ ತೋಟಗಾರಿಕಾ ಸಚಿವರ ಸಚಿವರ ಆಪ್ತ ಕಾರ್ಯದರ್ಶಿ, 3ನೇ ಮಹಡಿ, ವಿಕಾಸಸೌಧ, ಬೆಂಗಳೂರು ರವರಿಗೆ ಕಳುಹಿಸುತ್ತಾ ಸದರಿ ಆದೇಶವನ್ನು ಮಾನ್ಯ ತೋಟಗಾರಿಕಾ ಸಚಿವರ ಗಮನಕ್ಕೆ ತರಲು ಕೋರಿದೆ.

3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತಶಾಖೆ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

4. ಸರ್ಕಾರದ ಉಪಕಾರ್ಯದರ್ಶಿ-1 ಮತ್ತು 2 ರವರ ಆಪ್ತಶಾಖೆ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

5.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.